ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 20.06.2020

# ಆದೇಶ

ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:18.05.2020 ರಲ್ಲಿ ಕಂಟೈನ್ಮೆಂಟ್ ವಲಯಗಳನ್ನು ಹೊರತುಪಡಿಸಿ, ರಾಜ್ಯಾದ್ಯಂತ ಎಲ್ಲಾ ಸರ್ಕಾರಿ / ಪುರಸಭೆ ಉದ್ಯಾನವನಗಳನ್ನು ಬೆಳಿಗ್ಗೆ 7 ರಿಂದ 9 ಗಂಟೆಯವರೆಗೆ ಮತ್ತು ಸಂಜೆ 4 ರಿಂದ 7 ಗಂಟೆಯವರೆಗೆ ಸಾರ್ವಜನಿಕರಿಗಾಗಿ ತೆರೆಯಲು ಆದೇಶಿಸಲಾಗಿತ್ತು.

ಕೇಂದ್ರೀಯ ಗೃಹ ಮಂತ್ರಾಲಯವು ಆದೇಶ ಸಂಖ್ಯೆ: 40-3/2020-ಡಿಎಂ-ಐ (ಎ), ದಿನಾಂಕ:30.05.2020ರ ಕಂಟೈನ್‌ಮೆಂಟ್ ವಲಯಗಲ್ಲಿ ಲಾಕ್‌ಡೌನ್ ಅನ್ನು ದಿನಾಂಕ:30.06.2020ರ ವರೆಗೆ ವಿಸ್ತರಿಸಿದೆ ಮತ್ತು ಕಂಟೈನ್ ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಹಂತ ಹಂತವಾಗಿ ನಿಷೇಧಿತ ಚಟುವಟಿಕೆಗಳನ್ನು ತೆರೆಯಲು ಲಾಕ್‌ಡೌನ್ ಸಡಿಲಿಕೆಯ(ತೆರವು-1)ರ ಬಗ್ಗೆ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆ. ತತ್ಪರಿಣಾಮವಾಗಿ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:30.05.2020ರಲ್ಲಿ ಕಂಟೈನ್‌ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ಅನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಹಂತ ಹಂತವಾಗಿ ನಿಷೇಧಿತ ಚಟುವಟಿಕೆಗಳನ್ನು ತೆರೆಯಲು ಮಾರ್ಗಸೂಚಿಗಳನ್ನು ಹೊರಡಿಸಿದೆ. ಈ ಮಾರ್ಗಸೂಚಿಗಳು ದಿನಾಂಕ:30.06.2020ರ ವರೆಗೆ ಜಾರಿಯಲ್ಲಿರುತ್ತವೆ.

ಪ್ರಸ್ತುತ, ರಾಜ್ಯ ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:30.05.2020ರ ಹಿನ್ನೆಲೆಯಲ್ಲಿ, ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿ, ರಾಜ್ಯಾದ್ಯಂತ ಎಲ್ಲಾ ಸರ್ಕಾರಿ / ಪುರಸಭೆ ಉದ್ಯಾನವನಗಳನ್ನು ಬೆಳಿಗ್ಗೆ 5 ರಿಂದ ರಾತ್ರಿ 9 ಗಂಟೆಯ ಅವಧಿಯೊಳಗೆ ತೆರೆಯುವ ಅವಧಿಗಳನ್ನು ಸ್ಥಳೀಯ ಮಹಾನಗರ ಪಾಲಿಕೆ / ಪಾಲಿಕೆಗಳು ನಿಗದಿಪಡಿಸಲು ತಿಳಿಸಿದೆ.

ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ಸಂಬಂಧದಲ್ಲಿ ಹೊರಡಿಸಿದ ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

20/6/2020

**(ಎನ್. ಮಂಜುನಾಥ ಪ್ರಸಾದ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ
ವಿಪತ್ತು ನಿರ್ವಹಣಾ ಪ್ರಾಧಿಕಾರದ ರಾಜ್ಯ
ಕಾರ್ಯಕಾರಿ ಸಮಿತಿ, ಕಂದಾಯ ಇಲಾಖೆ.

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.